**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 22/2019**

**ಚಾ.ಸಾ. :- 21**
**ಪ್ರಾ.ಸಾ. :- 09**

| | | |
|---|---|---|
| ಹೆಸರು | : | ವಿನಯ್.ಇ.ವಿ |
| ತಂದೆಯ ಹೆಸರು | : | ವಾಸಪ್ಪ |
| ವಯಸ್ಸು | : | 49 ವರ್ಷ |
| ಉದ್ಯೋಗ | : | ಪಿ.ಐ., ಎಸ್.ಪಿ.ಕಛೇರಿ, ಹಾಸನ |
| ವಾಸಸ್ಥಳ | : | ಹಾಸನ. |

**ಪ್ರಮಾಣೀಕರಿಸಲಾದ ದಿನಾಂಕಃ- 06.04.2026.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ನಾನು 2019 ರ ಅವಧಿಯಲ್ಲಿ ಶ್ರೀರಂಗಪಟ್ಟಣದಲ್ಲಿ ವೃತ್ತ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 03.03.2019 ರಂದು ನಾನು ಚಾ.ಸಾ-20 ರವರಿಂದ ಕಡತವನ್ನು ಸ್ವೀಕರಿಸಿ ತನಿಖೆ ಮುಂದುವರೆಯಿಸಿರುತ್ತೇನೆ.

ಅಪಘಾತಕ್ಕೆ ಒಳಗಾದ ವಾಹನದ ಮಾಲೀಕರಿಗೆ ಐ.ಎಂ.ವಿ.ಕಾಯ್ದೆಯಡಿ ನೋಟೀಸ್ ನೀಡಿ ಉತ್ತರ ಪಡೆದಿರುತ್ತೇನೆ. ಸದರಿ ನೋಟೀಸ್ ಮತ್ತು ಉತ್ತರವನ್ನು ಈಗ ನೋಡುತ್ತಿದ್ದು, ಅವುಗಳನ್ನು ನಿಪಿ-18 ಮತ್ತು 19 ಎಂದು ಗುರುತಿಸಲಾಯಿತು. ಆರ್.ಟಿ.ಓ.ಅಧಿಕಾರಿಗಳು ವಾಹನವನ್ನು ಪರಿಶೀಲಿಸಿದ ನಂತರ ವಾಹನವನ್ನು ಬಾಂಡ್ ಪಡೆದು ಬಿಡುಗಡೆ ಮಾಡಿರುತ್ತೇನೆ.

ಮೃತರ ಪಿ.ಎಂ.ವರದಿಯನ್ನು ಸ್ವೀಕರಿಸಿ ಕಡತಕ್ಕೆ ಲಗತ್ತಿಸಿಕೊಂಡಿರುತ್ತೇನೆ. ಸದರಿ ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ಈಗಾಗಲೇ ನಿಪಿ-8 ಎಂದು ಗುರುತಿಸಲಾಗಿದೆ.

ನಂತರ ಪ್ರಕರಣದ ತನಿಖೆ ಪೂರ್ಣಗೊಂಡಿದ್ದರಿಂದ ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಿರುತ್ತೇನೆ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :**

ನಾನು ಹಿಂದಿನ ತನಿಖೆಯನ್ನು ಪರಿಶೀಲಿಸಿರುತ್ತೇನೆ. ನಿಪಿ-16 ರಲ್ಲಿ ಕಾರಿನ ಚಿತ್ರವನ್ನು ಬರೆದಿರುತ್ತಾರೆ ಎಂದರೆ ಸಾಕ್ಷಿ ಅಲ್ಲಿ ನಮೂದಿಸಿರುವ ವಾಹನದ ಸಂಖ್ಯೆ ಸರಿಯಿದ್ದು, ದ್ವಿಚಕ್ರ ವಾಹನದ ಬದಲಾಗಿ ಕಾರಿನ ಚಿತ್ರವನ್ನು ಬರೆದಿರುತ್ತಾರೆ ಎನ್ನುತ್ತಾರೆ. ಕಚ್ಚಾ ನಕಾಶೆಯನ್ನು ತಿದ್ದುಪಡಿ ಮಾಡಿ ಹಾಜರುಪಡಿಸಲು ತೊಂದರೆ ಇರಲಿಲ್ಲ ಎಂದರೆ ಸರಿ.

ಪಿ.ಎಂ.ವರದಿಯಲ್ಲಿ ಮೃತರು ಮದ್ಯಪಾನ ಮಾಡಿರುವುದಾಗಿ ನಮೂದು ಇದ್ದು, ಅದನ್ನು ಅಂತಿಮ ವರದಿಯಲ್ಲಿ ಹೇಳಿಲ್ಲ ಎಂದರೆ ಸಾಕ್ಷಿ PM and FSL ವರದಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವ ಕಾರಣ ಅದನ್ನು ಹೇಳಿಲ್ಲ ಎನ್ನುತ್ತಾರೆ. ಕುಡಿದು ವಾಹನ ಚಾಲನೆ ಮಾಡುವುದು ತಪ್ಪು ಎಂದರೆ ಸಾಕ್ಷಿ ಈ ಪ್ರಕರಣದಲ್ಲಿ ವರದಿಯ ಪ್ರಕಾರ 30mg/100ml ಮದ್ಯ ಸೇವನೆ ಕಂಡು ಬಂದಿದ್ದು ಅದು ಕಾನೂನು ಪರಿಮಿತಿಯ ಒಳಗೆ ಇರುತ್ತದೆ ಎನ್ನುತ್ತಾರೆ. 30mg/100ml ಮದ್ಯ ಸೇವನೆ ಕಾನೂನಬದ್ಧ ಎಂದು ತೋರಿಸಲು ದಾಖಲೆ ಇದೆಯೇ ಎಂದರೆ ಸಾಕ್ಷಿ ದಾಖಲೆ ಇಲ್ಲ, ಅದು ಕಾನೂನು ಎನ್ನುತ್ತಾರೆ.

ಮೃತರು ಚಾಲನಾ ಪರವಾನಗಿ ಇಲ್ಲದೇ ಚಾಲನೆ ಮಾಡಿದ್ದರೂ ಸಹ ನಾನು ಅವರ ವಿರುದ್ಧ ಅಂತಿಮ ವರದಿ ಸಲ್ಲಿಸಿಲ್ಲ ಎಂದರೆ ಸಾಕ್ಷಿ ನಮಗೆ ಅವರ ಚಾಲನಾ ಪರವಾನಗಿ ಸಿಕ್ಕಿಲ್ಲ ಎನ್ನುತ್ತಾರೆ. ಮೃತರ ತಪ್ಪಿನಿಂದಲೇ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ಮೃತರಿಗೆ  ದ್ವಿಚಕ್ರ ವಾಹನ ಚಾಲನೆ ಮಾಡಲು ಪರವಾನಗಿ ಇರಲಿಲ್ಲ ಎಂದರೆ

ನನಗೆ ಗೊತ್ತಿಲ್ಲ. ಸದರಿಯವರಿಗೆ ವಾಹನ ಚಾಲನೆ ಮಾಡಲು ಬರುತ್ತಿರಲಿಲ್ಲ, ಹಾಗಾಗಿ ಅವರ ಅಜಾಗರೂಕತೆ ಹಾಗೂ ನಿರ್ಲಕ್ಷ್ಯತನದಿಂದ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ.

ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ದೂರುದಾರರ ಕುಟುಂಬಕ್ಕೆ ವಿಮೆ ಪರಿಹಾರ ಕೊಡಿಸುವ ಸಲುವಾಗಿ ಸುಳ್ಳು ದಾಖಲಾತಿ ಸೃಷ್ಟಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ :- ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**